**PW-**2.

**ದಿನಾಂಕಃ 04.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಪ್ರಮಾಣ ಪತ್ರದ ಮೂಲಕಃ- ಶ್ರೀ D.M.N ವಕೀಲರಿಂದಃ-**

1) ಈ ದಿನ ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಅದರಲ್ಲಿ ಬರೆದ ಎಲ್ಲಾ ವಿಷಯಗಳು ಸತ್ಯವಾಗಿದ್ದು, ಅವುಗಳನ್ನು ಓದಿಸಿ ತಿಳಿದುಕೊಂಡು ಸರಿ ಎಂದು ದೃಢೀಕರಿಸಿ ನಾನು ನನ್ನ ಸಹಿ ಮಾಡಿದ್ದೇನೆ.

2) ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಮೃತ ಭರಮಾ ಮಾಡಿಟ್ಟ ಮೃತ್ಯುಪತ್ರ ಹಾಗೂ ಹೆಬ್ಬೆಟ್ಟು ಹಾಗೂ ಸಹಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ಸದರಿ ಮೃತ್ಯುಪತ್ರ ಹಾಗೂ ಭರಮಾನ ಹೆಬ್ಬೆಟ್ಟು ಸಹಿಗಳನ್ನು ನೋಡಿ ಗುರುತಿಸಿದ್ದು, ಮೃತ್ಯುಪತ್ರವನ್ನು ನಿ.ಪಿ 7 ಎಂದು ಗುರುತಿಸಲಾಯಿತು. ಸಾಕ್ಷಿ ನಿ.ಪಿ 7 ದಾಖಲೆ ಮೇಲಿನ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿ.ಪಿ 7(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಸದರಿ ಮೃತ್ಯುಪತ್ರಕ್ಕೆ ಹಾಜರಿದ್ದ ಇನ್ನೊಬ್ಬ ಸಾಕ್ಷಿದಾರನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ 7(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ದಸ್ತ ಬರಹಗಾರರ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.7(ಸಿ) ಅಂತಾ ಗುರುತಿಸಲಾಯಿತು.

**ಪಾಟೀ ಸವಾಲುಃ** ಎದುರುಗಾರರು ಯಾರು ಇಲ್ಲದೇ ಇದ್ದ ಕಾರಣ, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು.)

(ಸಾಕ್ಷಿಗೆ ಓ ಹೆ ಕೆ ಸರಿ ಅದೆ)

ಬೆಳಗಾವಿಯ 7 ನೇ ಹೆಚ್ಚುವರಿ ಜಿಲ್ಲಾ ಮತ್ತು
ಸತ್ರ ನ್ಯಾಯಾಧೀಶರು ಚಿಕ್ಕೋಡಿ .